ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2014–15 : ಮೇ 25, 2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಪತ್ರಿಕಾಗೋಷ್ಠಿ:<br><br>1. ಶ್ರೀ ಆರ್.ವಿ. ದೇಶಪಾಂಡೆ, ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವರು<br><br>2. ಶ್ರೀ ಮಾರಿಯೋ ಹಾರ್ಡಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಫೆಸಿಫಿಕ್ ಏಷಿಯಾ ಟ್ರಾವಲರ್ಸ್ ಅಸೋಸಿಯೇಷನ್ | 26–5–2015<br>ಮಂಗಳವಾರ<br>ಅಪರಾಹ್ನ<br>12–00 ಗಂಟೆಗೆ | ಹಾಲ್ ನಂ. 1 & 2<br>ಹೋಟೆಲ್ ಲಲಿತ್ ಅಶೋಕ್<br>ಕುಮಾರಕೃಪ ರಸ್ತೆ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಗ್ರಾಮಪಂಚಾಯತಿ ಚುನಾವಣೆ: ಎಡಗೈ ಹೆಬ್ಬೆರಳಿಗೆ ಶಾಯಿ ಗುರುತು

ಬೆಂಗಳೂರು, ಮೇ 25 (ಕರ್ನಾಟಕ ವಾರ್ತೆ)

ರಾಜ್ಯಾದ್ಯಂತ ವಿವಿಧ ಸಹಕಾರ ಸಂಘಗಳ, ಸಹಕಾರಿ ಬ್ಯಾಂಕುಗಳು ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಸಂಸ್ಥೆಗಳಿಗೆ ಇತ್ತೀಚೆಗೆ ಚುನಾವಣೆಗಳು ನಡೆದಿದ್ದು, ಮತದಾರರ ಎಡಗೈ ತೋರು ಬೆರಳಿಗೆ, ಎಡಗೈ ನಡು ಬೆರಳಿಗೆ, ಎಡಗೈ ಕಿರು ಬೆರಳಿಗೆ, ಎಡಗೈ ಉಂಗುರದ ಬೆರಳಿಗೆ, ಬಲಗೈ ತೋರು ಬೆರಳಿಗೆ ಅಳಿಸಲಾಗದ ಶಾಯಿಯನ್ನು ಹಾಕಿರುವ ಹಿನ್ನೆಲೆಯಲ್ಲಿ ಪ್ರಸ್ತುತ ದಿನಾಂಕ 29–5–2015 ಮತ್ತು ದಿನಾಂಕ 2–6–

2015 ರಂದು ಎರಡು ಹಂತಗಳಲ್ಲಿ ನಡೆಯಲಿರುವ ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ ಮತದಾನದ ವೇಳೆ ಮತದಾರರ ಎಡಗೈ ಹೆಬ್ಬೆರಳಿಗೆ ಅಳಿಸಲಾಗದ ಶಾಯಿಯನ್ನು ಹಾಕಲು ಆಯೋಗವು ತೀರ್ಮಾನಿಸಿದೆ.
ಪಲ್ಲವಿ/ಬಾಬು/ಕೆಎಂ

# ಮಹಾಲಕ್ಷ್ಮಿಪುರಂನ ಪ್ರಸನ್ನ ವೀರಾಂಜನೇಯಸ್ವಾಮಿ ದೇವಸ್ಥಾನದಲ್ಲಿ ವಾರ್ಷಿಕೋತ್ಸವ

ಬೆಂಗಳೂರು, ಮೇ 25 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಇಲಾಖೆಗೆ ಸೇರಿದ ಬೆಂಗಳೂರು ಮಹಾಲಕ್ಷ್ಮಿಪುರಂನ ಶ್ರೀ ಪ್ರಸನ್ನ ವೀರಾಂಜನೇಯಸ್ವಾಮಿ ದೇವಸ್ಥಾನದಲ್ಲಿ ಮೇ 28 ರಿಂದ ಜೂನ್ 2 ರವರೆಗೆ 39 ನೇ ವಾರ್ಷಿಕ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ವಿಶೇಷ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.
ಬಾಬು/ಕೆಎಂ

# ಸಾಕ್ಷ್ಯಚಿತ್ರ ತಯಾರಿಸಲು ಅರ್ಜಿ ಆಹ್ವಾನ

ಬೆಂಗಳೂರು, ಮೇ 25 (ಕರ್ನಾಟಕ ವಾರ್ತೆ)

ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿಯ ವತಿಯಿಂದ 2014-15 ನೇ ಸಾಲಿನಲ್ಲಿ ಯಕ್ಷಗಾನ ಬಯಲಾಟ ಕಲೆ/ಕಲಾವಿದರ ಸಾಕ್ಷ್ಯಚಿತ್ರ ತಯಾರಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಸಾಕ್ಷ್ಯಚಿತ್ರ ತಯಾರಿಕೆಯಲ್ಲಿ ಕನಿಷ್ಠ 10 ವರ್ಷಗಳ ಅನುಭವವುಳ್ಳ ಆಸಕ್ತ ನಿರ್ದೇಶಕರು/ನಿರ್ಮಾಪಕರು ಅರ್ಜಿಯನ್ನು ಸಲ್ಲಿಸಬಹುದು.

ಅರ್ಜಿಯನ್ನು ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿಯಲ್ಲಿ ಪಡೆಯಬಹುದಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 15-6-2015. ವಿವರಗಳಿಗೆ ಅಕಾಡೆಮಿ ರಿಜಿಸ್ಟ್ರಾರ್‌ನ್ನು ದೂರವಾಣಿ 080-22223146 ಮೂಲಕ ಸಂಪರ್ಕಿಸಬಹುದು.

ಪಲ್ಲವಿ/ಬಾಬು/ಕೆಎಂ

# ಮೋಟಾರು ಸಾರಿಗೆ ನೋಂದಣಿ ಸಂಖ್ಯೆಗಳ ಬಹಿರಂಗ ಹರಾಜು

ಬೆಂಗಳೂರು, ಮೇ 25 (ಕರ್ನಾಟಕ ವಾರ್ತೆ)

ಕರ್ನಾಟಕ ಮೋಟಾರು ವಾಹನಗಳ ನಿಯಮಾವಳಿ ಲಘು ಮೋಟಾರು ವಾಹನಗಳಿಗೆ (ಸಾರಿಗೇತರ ವರ್ಗದ, ಕಾರು, ಜೀಪು ಇತ್ಯಾದಿ ಸ್ವಂತ ಉಪಯೋಗಕ್ಕಾಗಿ ಬಳಸುವ ವಾಹನಗಳು) ದಿನಾಂಕ 26–5–2015 ರಂದು ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿ ಕಚೇರಿ, ಬೆಂಗಳೂರು (ಪೂರ್ವ) ಇಂದಿರಾನಗರದಲ್ಲಿ ಪ್ರಾರಂಭಿಸಲಾಗುವ " **KA-03/MX**" ಮುಂಗಡ ನೋಂದಣಿ ಶ್ರೇಣಿಯಲ್ಲಿ ಆಯ್ಕೆ ನೋಂದಣಿ ಸಂಖ್ಯೆಗಳನ್ನು ಮೇಲೆ ನಿರ್ಧಿಷ್ಟಪಡಿಸಿದ ದಿನಾಂಕದಂದು ಸಾರಿಗೆ ಆಯುಕ್ತರ ಕಚೇರಿ, 1 ನೇ ಮಹಡಿ, ಟಿಟಿಎಂಸಿ ಕಟ್ಟಡ, ಕೆ.ಹೆಚ್. ರಸ್ತೆ, ಶಾಂತಿನಗರ, ಬೆಂಗಳೂರು –560 027 ಇಲ್ಲಿ ಬೆಳಿಗ್ಗೆ 12.00 ಗಂಟೆಗೆ ಬಹಿರಂಗ ಹರಾಜು ಮೂಲಕ ಹಂಚಿಕೆ ಮಾಡಲು ನಿಗದಿಪಡಿಸಲಾಗಿದೆ.

ಈ ದಿನಾಂಕದಂದು ಹರಾಜಿನಲ್ಲಿ ಭಾಗವಹಿಸುವ ಸಾರ್ವಜನಿಕರು ಭರ್ತಿ ಮಾಡಿದ ಅರ್ಜಿಯೊಂದಿಗೆ ಕಾರ್ಯದರ್ಶಿ, ರಾಜ್ಯ ಸಾರಿಗೆ ಪ್ರಾಧಿಕಾರ, ಬೆಂಗಳೂರು ಇವರ ಹೆಸರಿನಲ್ಲಿ ಪಡೆದ ರೂ. 75,000/– ಗಳ ಡಿಮ್ಯಾಂಡ್ ಡ್ರಾಫ್ಟ್‌ನ್ನು (ಸಹಕಾರಿ ಬ್ಯಾಂಕ್‌ಗಳಲ್ಲಿ ಪಡೆದ ಡಿ.ಡಿ.ಗಳನ್ನು ಹೊರತುಪಡಿಸಿ) ಬೆಳಿಗ್ಗೆ 10.00 ಗಂಟೆಯಿಂದ 12.00 ಗಂಟೆಯವರೆಗೆ ಕಛೇರಿಯಲ್ಲಿ ಸ್ವೀಕರಿಸಲಾಗುವುದು.

ಈ ಬಗ್ಗೆ ಅಧಿಸೂಚನೆಯನ್ನು ಇಲಾಖೆಯ ವೆಬ್‌ಸೈಟ್ **www.rto.kar.nic.in** ರಲ್ಲಿ ಪ್ರಕಟಿಸಲಾಗಿದೆ ಹಾಗೂ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080– 22232434 ಗೆ ಸಂಪರ್ಕಿಸಲು ತಿಳಿಸಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಯೋಜನಯ ಸಂಪೂರ್ಣ ಪ್ರಯೋಜನವನ್ನು ಪಡೆದುಕೊಳ್ಳಲು ಕೋರಿದೆ.

ಪಲ್ಲವಿ/ಬಾಬು/ಕೆಎಂ

## ಅವಧಿ ವಿಸ್ತರಣೆ

ಬೆಂಗಳೂರು, ಮೇ 25 (ಕರ್ನಾಟಕ ವಾರ್ತೆ)

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು 2015–2016 ನೇ ಶೈಕ್ಷಣಿಕ ಸಾಲಿನಲ್ಲಿ ದೂರ ಶಿಕ್ಷಣದ ಮೂಲಕ ಕನ್ನಡ ಭಾಷೆಯಲ್ಲಿ "ಸಮಗ್ರ ಕೃಷಿ" "ಆಹಾರ ಧಾನ್ಯ, ಹಣ್ಣು ಮತ್ತು ತರಕಾರಿಗಳ ಕೋಯ್ಲೋತ್ತರ ನಿರ್ವಹಣೆ" ಮತ್ತು "ಸಾವಯವ ಕೃಷಿ" ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಭರ್ತಿಮಾಡಿದ ಅರ್ಜಿಗಳನ್ನು ಸಲ್ಲಿಸಲು ದಿನಾಂಕ 30–5–2015 ರವರೆಗೆ ವಿಸ್ತರಿಸಿದೆ. ಆಸಕ್ತರು ಅರ್ಜಿಗಳನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿರುವ ಕೃಷಿ ವಿಜ್ಞಾನ ಕೇಂದ್ರಗಳು ಅಥವಾ ವಿಸ್ತರಣಾ ನಿರ್ದೇಶನಾಲಯ, ಹೆಬ್ಬಾಳ ಬೆಂಗಳೂರು–560 024 ಇವರಿಂದ ಪಡೆಯಬಹುದು. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 080–23418883 ಅಥವಾ 080–23410560 ಸಂಪರ್ಕಿಸಲು ಕೋರಿದೆ.

ಪಲ್ಲವಿ/ಬಾಬು/ಕೆಎಂ